1. ಬೀದರ್ ಕೋಟೆ
2. ಮಹಮದ್ ಗವಾನ್ ಮದರಸ
3. ನಾನಕ್‌ಝರ
4. ನರಸಿಂಹಜಾರಿಣಿ

ಬೀದರ್ ಗ್ರಾಮಾಂತರ ಪ್ರದೇಶದಲ್ಲಿ ಗುರುತಿಸಲಾಗಿರುವ ಪ್ರವಾಸಿ ಕೇಂದ್ರಗಳು.

1. ಚೌಕಾಂಡಿ
2. ಅಸ್ತೂರ ಟೂಂಬ್ಸ್
3. ವಿಲಾಸಪುರ ಕೆರೆ
4. ಪಾಪನಾಶ ಶಿವ ದೇವಾಲಯ

ಯುವ ಕ್ರೀಡಾಪಟುಗಳಿಗೆ ಉತ್ತೇಜನ ನೀಡುವುದು

114 (178) ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ): ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ಮತಕ್ಷೇತ್ರದಲ್ಲಿ ಯುವಜನ ಸೇವಾ ಇಲಾಖೆಯಿಂದ ಯಾವ ಯಾವ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ;

ಆ) ಇದಕ್ಕಾಗಿ ಕಳೆದ ಎರಡೂವರೆ ವರ್ಷಗಳಲ್ಲಿ ವೆಚ್ಚ ಮಾಡಿರುವ ಹಣವೆಷ್ಟು;

ಇ) ಈ ಕ್ಷೇತ್ರದಲ್ಲಿರುವ ಯುವ ಕ್ರೀಡಾಪಟುಗಳಿಗೆ ಉತ್ತೇಜನ ನೀಡಲು ಮತ್ತು ಇವರುಗಳನ್ನು ಪ್ರೋತ್ಸಾಹಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ಪೂರ್ಣ ವಿವರಗಳನ್ನು ಒದಗಿಸುವುದು)?

ಶ್ರೀ ಜಿ. ಜನಾರ್ದನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು):

ಅ) ಬಸವಕಲ್ಯಾಣ ಪಟ್ಟಣದಲ್ಲಿ ತಾಲೂಕು ಕ್ರೀಡಾಂಗಣ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗಿದೆ. ಪಂಚಾಯತ್ ಯುವ ಕ್ರೀಡಾ ಔರ್ ಖೇಲ್ ಅಭಿಯಾನ್ ಯೋಜನೆಯಡಿ ಬಸವಕಲ್ಯಾಣ ತಾಲ್ಲೂಕಿನಲ್ಲಿ ಈ ಕೆಳಕಂಡ ಸ್ಥಳಗಳಲ್ಲಿ ಗ್ರಾಮ ಪಂಚಾಯತ್ ಮಟ್ಟದ ಪೈಕಾ ಕೇಂದ್ರಗಳನ್ನು 2008–09ರಲ್ಲಿ ಸ್ಥಾಪಿಸಲಾಗಿದೆ.

1. ವಿದ್ಯಾಪೀಠ, ಬಸವಕಲ್ಯಾಣ
2. ಸರ್ಕಾರಿ ಪ್ರೌಢಶಾಲೆ, ಗೋಟಾಲಾ
3. ಸರ್ಕಾರಿ ಪ್ರೌಢಶಾಲೆ, ಬಾಟಗೇರ

ಮೇಲೆ ತಿಳಿಸಿದ ಗ್ರಾಮ ಪಂಚಾಯತ್ ಮಟ್ಟದ ಪ್ರತಿ ಪೈಕಾ ಕೇಂದ್ರಗಳಿಗೆ ತಲಾ ರೂ. 1.00 ಲಕ್ಷ ಅನುದಾನವನ್ನು ಕ್ರೀಡಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಸಲುವಾಗಿ ಮಂಜೂರು ಮಾಡಲಾಗಿದ್ದು, ಇದರ ಪೈಕಿ ಶೇಕಡ 50ರಷ್ಟು ಅನುದಾನವನ್ನು 2008-09ರಲ್ಲೂ ಮತ್ತು ಉಳಿದ ಶೇಕಡ 50ರಷ್ಟು ಅನುದಾನವನ್ನು 2009-10ರಲ್ಲೂ ಬಿಡುಗಡೆಗೊಳಿಸಲಾಗಿದೆ.

ಆ) ಬಸವ ಕಲ್ಯಾಣ ತಾಲೂಕು ಕ್ರೀಡಾಂಗಣ ನಿರ್ಮಾಣ ಕಾಮಗಾರಿಗಾರಿ ರೂ. 70.00 ಲಕ್ಷಗಳನ್ನು ಮಂಜೂರು ಮಾಡಿ ಬಿಡುಗಡೆ ಮಾಡಲಾಗಿದೆ. ನಿರ್ಮಾಣ ಕಾರ್ಯ ಪೂರ್ಣಗೊಂಡಿದೆ.

ಪೈಕಾ ಯೋಜನೆಯಡಿ ಗ್ರಾಮ ಪಂಚಾಯತ್ ಮಟ್ಟದ ಪೈಕಾ ಕೇಂದ್ರಗಳನ್ನು ಸ್ಥಾಪಿಸಲು ರೂ. 3.00 ಲಕ್ಷ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. ಇದಲ್ಲದೆ, ಪೈಕಾ ಅರ್ಜನಾ ಹಾಗೂ ಪೈಕಾ ಕಾರ್ಯಾಚರಣೆ ಅನುದಾನದ ಅಡಿಯಲ್ಲಿ ತಲಾ ಪೈಕಾ ಕೇಂದ್ರಕ್ಕೆ ರೂ. 20,000 ಸಾವಿರದಂತೆ ರೂ. 60 ಸಾವಿರ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.

ಇ) ಕ್ರೀಡಾಂಗಣದ ಸೌಲಭ್ಯವನ್ನು ಕಲ್ಪಿಸಲಾಗಿದೆ. ಪೈಕಾ ಯೋಜನೆ ಅಡಿ ಗ್ರಾಮ ಮಟ್ಟದ ಯುವಕರು ಹಾಗೂ ಕ್ರೀಡಾಪಟುಗಳು ನಿರ್ದಿಷ್ಟವಾಗಿ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಲು ಉತ್ತೇಜನ ನೀಡುವ ಸಲುವಾಗಿ ಶಿಕ್ಷಣ ಇಲಾಖೆಯ ದೈಹಿಕ ಶಿಕ್ಷಣ ಶಿಕ್ಷಕರನ್ನು ಸಂಭಾವನೆ ಆಧಾರದ ಮೇಲೆ ನೇಮಿಸಿಕೊಂಡು ಅವರಿಗೆ ರಾಷ್ಟ್ರಮಟ್ಟದ ಕ್ರೀಡಾ ತರಬೇತಿ ನೀಡಿ ಅದರಿಂದ ಉಂಟಾದ ಪ್ರತಿಭೆಯನ್ನು ಗ್ರಾಮೀಣ ಯುವ ಜನರಿಗೆ ಕ್ರೀಡೆಗಳಲ್ಲಿ ತರಬೇತಿ ನೀಡಲು ಬಳಸಿಕೊಳ್ಳಲಾಗುತ್ತಿದೆ. ಕ್ರೀಡಾ ಸಾಮಗ್ರಿಗಳನ್ನು ಕೊಳ್ಳಲು ಪ್ರತಿ ಗ್ರಾಮಕ್ಕೂ ಹಣಕಾಸು ಸೌಲಭ್ಯ ಒದಗಿಸಲಾಗುತ್ತಿದೆ.

ಭಾಲ್ಕಿ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳ ವಿವರ

116 (184) ಶ್ರೀ ಈಶ್ವರ ಭೀಮಣ್ಣ ಖಂಡ್ರೆ (ಭಾಲ್ಕಿ): ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?